8(9)

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ನಬಾರ್ಡ್ ಆರ್‌ಐಡಿಎಫ್ ಯೋಜನೆಯಡಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಅನುಮೋದಿಸುವ ಕುರಿತು.

**ಓದಲಾಗಿದೆ:** ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಪತ್ರ ಸಂ: ಕೈವಾಇ/ ಜಿಕೈಕೇ/ಸಿ2/01/ಮಾರ್ಗಸೂಚಿ/2016-17 ದಿ: 10.06.2016.

**ಪ್ರಸ್ತಾವನೆ**

ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ನೆರವಿನೊಂದಿಗೆ ಅನುಷ್ಠಾನಗೊಳಿಸುತ್ತಿರುವ ನಬಾರ್ಡ್ ಸಂಸ್ಥೆಯ RIDF (Rural Infrastructure Development Fund) ಯೋಜನೆಯಲ್ಲಿ Infrastructure for Rural Education Institutions ರಡಿ ಸಾಲ ಸೌಲಭ್ಯವನ್ನು ನೀಡಲಾಗುತ್ತಿದ್ದು, ಯೋಜನಾ ವೆಚ್ಚದ ಶೇ. 85ರಷ್ಟು ಮತ್ತು ಇನ್ನುಳಿದ ವೆಚ್ಚವನ್ನು ರಾಜ್ಯ ಸರ್ಕಾರ / ಸಂಸ್ಥೆಯು ಭರಿಸಿಕೊಂಡು ಯೋಜನೆಯನ್ನು ಅನುಷ್ಠನಗೊಳಿಸಬೇಕಾಗಿರುತ್ತದೆ. ಆದುದರಿಂದ, ನಬಾರ್ಡ ಆರ್‌ಐಡಿಎಫ್ ಯೋಜನೆಯಡಿ ಅಗತ್ಯವಿರುವ ತರಬೇತಿ ಕಟ್ಟಡ, ಕಾರ್ಯಗಾರ ಕಟ್ಟಡ (ವರ್ಕ್‌ಶಾಫ್), ಪ್ರಯೋಗಾಲಯ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸಲು ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ. ಆದುದರಿಂದ, ಸದರಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ಸಿದ್ಧಪಡಿಸಿ, ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 47 ಸಪ್ರಕೈ 2016 ಬೆಂಗಳೂರು, ದಿನಾಂಕ: 30.08.2016**

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ನಬಾರ್ಡ್ ಆರ್‌ಐಡಿಎಫ್ ಯೋಜನೆಯಡಿ ಸಾಲ ಸೌಲಭ್ಯವನ್ನು ನೀಡಲಾಗುತ್ತಿದ್ದು, ಯೋಜನಾ ವೆಚ್ಚದ ಶೇ. 85ರಷ್ಟು ನಬಾರ್ಡ್ ವತಿಯಿಂದ ಮತ್ತು ಇನ್ನುಳಿದ ವೆಚ್ಚವನ್ನು ರಾಜ್ಯ ಸರ್ಕಾರ / ಸಂಸ್ಥೆಯು ಭರಿಸಿಕೊಂಡು ಅಗತ್ಯವಿರುವ ತರಬೇತಿ ಕಟ್ಟಡ, ಕಾರ್ಯಗಾರ ಕಟ್ಟಡ (ವರ್ಕ್‌ಶಾಫ್) ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ತರಬೇತಿ ಸಂಸ್ಥೆಗಳು ಅನುಷ್ಠಾಗೊಳಿಸುವ ಕಾರ್ಯಕ್ರಮ / ಯೋಜನೆಗಳಿಗೆ ಮರುರೂಪಿಸಿದ ಈ ಕೆಳಕಂಡ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಲಾಗಿದೆ. ಈ ಯೋಜನೆಯ ಅನುಷ್ಠಾನವನ್ನು ಈ ಆದೇಶದಲ್ಲಿ ಅನುಮೋದಿಸಲಾಗಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

ನಬಾರ್ಡ್ ಸಂಸ್ಥೆಯು ಕಾಲಕಾಲಕ್ಕೆ ಮಾರ್ಪಡಿಸಿದ್ದಲ್ಲಿ ಅದನ್ನು ಅಳವಡಿಸಿಕೊಳ್ಳತಕ್ಕದ್ದು.

ಈ ಯೋಜನೆಯ ಮಾರ್ಗಸೂಚಿ ಕುರಿತಂತೆ ರಾಜ್ಯ ಸರ್ಕಾರದಿಂದ ಹಿಂದೆ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಲಾಗಿದೆ.

## ನಬಾರ್ಡ್-ಆರ್‌ಐಡಿಎಫ್ ವರ್ಕ್ಸ್

### ಲೆಕ್ಕಶೀರ್ಷಿಕೆ 4851-00-102-0-09(436) ನಬಾರ್ಡ್ ವರ್ಕ್ಸ್

ನಬಾರ್ಡ್ ಮತ್ತು ರಾಜ್ಯ ಸರ್ಕಾರದ ನೆರವಿನೊಂದಿಗೆ ಅನುಷ್ಠಾನಗೊಳಿಸುತ್ತಿರುವ ನಬಾರ್ಡ್ ಸಂಸ್ಥೆಯ RIDF (Rural Infrastructure Development Fund) ಯೋಜನೆಯಲ್ಲಿ Infrastructure for Rural Education Institutions ರಡಿ ಯೋಜನಾ ವೆಚ್ಚದ ಶೇ. 85ರಷ್ಟು ಸಾಲ ಸೌಲಭ್ಯವನ್ನು ನೀಡಲಾಗುತ್ತಿದ್ದು, ಇನ್ನುಳಿದ ವೆಚ್ಚವನ್ನು ರಾಜ್ಯ ಸರ್ಕಾರ / ಸಂಸ್ಥೆಯು ಭರಿಸಿಕೊಂಡು ಯೋಜನೆಯನ್ನು ಅನುಷ್ಠನಗೊಳಿಸಬೇಕಾಗಿರುತ್ತದೆ. ಆದುದರಿಂದ, ನಬಾರ್ಡ ಆರ್‌ಐಡಿಎಫ್ ಯೋಜನೆಯಡಿ ಅಗತ್ಯವಿರುವ ತರಬೇತಿ ಕಟ್ಟಡ ಕಾರ್ಯಗಾರ (ವರ್ಕ್ಸ್‌ಶಾಫ್) ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಅನುಷ್ಠಾನ ತರಬೇತಿ ಸಂಸ್ಥೆಗಳಿಗೆ ಅವಕಾಶವನ್ನು ಕಲ್ಪಿಸಲಾಗಿದೆ.

**ಎ) ಅನುಷ್ಠಾನ ಸಂಸ್ಥೆಗಳು:**

ಜಿಟಿಟಿಸಿ ಮತ್ತು ಸರ್ಕಾರಿ ಸೌಮ್ಯದ ಸಂಸ್ಥೆಗಳು.

**ಬಿ) ಸಲ್ಲಿಸಬೇಕಾದ ದಾಖಲಾತಿಗಳು:**

**ಅ) ಕಟ್ಟಡ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ**

- ಹೊಸ ಸಂಸ್ಥೆ/ಕೇಂದ್ರವಾಗಿದ್ದಲ್ಲಿ ಸರ್ಕಾರದ ಅನುಮೋದಿತ ಆದೇಶ
- ಸಂಸ್ಥೆಯ ಹೆಸರಿನಲ್ಲಿ ಭೂಮಿ/ಕಟ್ಟಡ ಇರುವ ಬಗ್ಗೆ ದಾಖಲಾತಿಗಳು.
- ಕಟ್ಟಡದ ನೀಲಿ ನಕ್ಷೆ.
- ಪ್ರಸಕ್ತ ಸಾಲಿನ ಎಸ್.ಆರ್ ದರದಂತೆ ತಾಂತ್ರಿಕ ಅನುಮೋದನೆಯೊಂದಿಗೆ ಅಂದಾಜು ಪಟ್ಟಿ.
- ಉದ್ದೇಶಿತ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ತಯಾರಿಸಿದ ಪರ್ಟ ಚಾರ್ಟ.
- ಕಟ್ಟಡದ ಅವಶ್ಯಕತೆ ಬಗ್ಗೆ ನಿರ್ಮಾಣದ ಸಂಸ್ಥೆಯ ವಿವರಗಳ ಯೋಜನಾ ವರದಿ (ಡಿ.ಪಿ.ಆರ್)
- ಕಾಮಗಾರಿಯ ನಿರ್ಮಾಣಕ್ಕೆ ಸಂಬಂಧಪಟ್ಟ ಸಂಸ್ಥೆಯ ಆಡಳಿತ ಮಂಡಳಿ / ಸಮಿತಿ ಅನುಮೋದನೆ ಪಡೆದಿರುವ ಪ್ರತಿ.
- ಕೇಂದ್ರದಲ್ಲಿ ಈಗಾಗಲೇ ಇರುವ ಕಟ್ಟಡಗಳ ವಿವರ ಹಾಗೂ ಅವುಗಳ ಬಳಕೆ ಬಗ್ಗೆ ವಿವರಣೆ.
- ಸದರಿ ಪ್ರಸ್ತಾವನೆ ಕುರಿತು ಈಗಾಗಲೇ ಸರ್ಕಾರದಿಂದ ವಿವಿಧ ಯೋಜನೆಗಳಡಿ ಬಿಡುಗಡೆ ಮಾಡಿರುವ ಅನುದಾನ, ಬಳಕೆ ಹಾಗೂ ಬಳಕೆ ಪ್ರಮಾಣ ಪತ್ರ ಸಲ್ಲಿಸಿರುವ ಕುರಿತಂತೆ ವಿವರ ಹಾಗೂ ಸೃಜಿಸಿರುವ ಸ್ಥಿರಾಸ್ತಿ ವಿವರಗಳು.

**ಷರತ್ತು ಮತ್ತು ನಿಬಂಧನೆಗಳು:**

- ಬಿಡುಗಡೆಯಾದ ಅನುದಾನವನ್ನು ಅನುಮೋದಿತ ಕಾರ್ಯಕ್ರಮಗಳಿಗೆ ಮಾತ್ರ ಬಳಸತಕ್ಕದ್ದು.
- ಯೋಜನಾ ವೆಚ್ಚಕ್ಕಿಂತ ಹೆಚ್ಚುವರಿಯಾದಲ್ಲಿ ಅದನ್ನು ಸಂಸ್ಥೆಯೇ ಭರಿಸತಕ್ಕದ್ದು.
- ಯೋಜನೆ ಅನುಷ್ಠಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಅದರಡಿಯಲ್ಲಿ ರೂಪಿಸಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
- ಯೋಜನೆ ಅನುಷ್ಠಾನವನ್ನು ಪಾರ್ಟ ಚಾರ್ಟ್ ಪ್ರಕಾರ ಪೂರ್ಣಗೊಳಿಸಿ ಉಪಯುಕ್ತ ಪ್ರಮಾಣ ಪತ್ರ ಮತ್ತು ಖರ್ಚಿನ ವಿವರ ಸಲ್ಲಿಸತಕ್ಕದ್ದು.

- ಕಟ್ಟಡದ ನಿರ್ಮಾಣಕ್ಕೆ ಸಂಬಂಧಿಸಿದಂತೆ ಗುಣಮಟ್ಟದ ತಪಾಸಣಾ ವರದಿಯನ್ನು ಮೂರನೇ ವ್ಯಕ್ತಿ/ ಸಂಸ್ಥೆಯಿಂದ ಖಾತರಿ ಪಡಿಸತಕ್ಕದ್ದು.
- ಸರ್ಕಾರವು ಆಗಿಂದಾಗ್ಗೆ ಸೂಚಿಸುವ ನಿಯಮ ಹಾಗೂ ನಿರ್ದೇಶನಗಳ ಪಾಲನೆ ಮಾಡತಕ್ಕದ್ದು

**ಯೋಜನೆ ಅನುಷ್ಠಾನ:**

- ➢ ಸದರಿ ಯೋಜನಾ ವರದಿಯ (ಡಿಪಿಆರ್) ಪ್ರಸ್ತಾವನೆಯನ್ನು ಆಯುಕ್ತರು, ಕೈಗಾರಿಕಾಭಿವೃದ್ಧಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಮುಖಾಂತರ ಸರ್ಕಾರಕ್ಕೆ ಸಲ್ಲಿಸಿ ಆರ್‌ಐಡಿಎಫ್, ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಮಂಡಿಸಿ, ಅನುಮೋದನೆ ಪಡೆದುಕೊಳ್ಳುವುದು.
- ➢ ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳೊಂದಿಗೆ ಅನುಷ್ಠಾನ ಸಂಸ್ಥೆಗಳು ಪ್ರಸ್ತಾವನೆಯನ್ನು ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
- ➢ ನಿರ್ದೇಶನಾಲಯವು ಪ್ರಸ್ತಾವನೆಯನ್ನು ಮಾರ್ಗಸೂಚಿಯನ್ವಯ ಪರಿಶೀಲಿಸಿದ ನಂತರ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಸಲ್ಲಿಸುವುದು.
- ➢ ಅನುಷ್ಠಾನ ಸಂಸ್ಥೆಯು ಬಿಡುಗಡೆಯಾಗಿರುವ ಅನುದಾನವನ್ನು ಸದ್ಬಳಕೆ ಮಾಡಲು ಕೈಗೊಂಡಿರುವ ಕ್ರಮವನ್ನು ಪರಿಶೀಲಿಸಿ, ತದನಂತರ ನಿರ್ದೇಶನಾಲಯವು ಬಾಕಿ ಅನುದಾನ ಬಿಡುಗಡೆಗೆ ಕ್ರಮ ಜರುಗಿಸತಕ್ಕದ್ದು.

**ಈ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 312 ವೆಚ್ಚ-1/ 2016 ದಿ: 27.08.2016 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂ: ಪಿಡಿ 31 ಎಫ್‌ಆರ್‌ಓ 2016 ದಿ: 17.08.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Nagaraja
[ಎಸ್.ನಾಗರಾಜ] 30/08/2016,
ಪೀಠಾಧಿಕಾರಿ [ಸಪ್ರಕ್ಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

***ಸಂಕಲಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಶಾಖೆಗೆ ಒದಗಿಸಲು ಕೋರಲಾಗಿದೆ.***

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ. 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂ.5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ.5329, ಬೆಂಗಳೂರು-560001.
3. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.

10. ಡೆಪ್ಯೂಟಿ ಜನರಲ್ ಮ್ಯಾನೇಜರ್, ನಬಾರ್ಡ್, ಕರ್ನಾಟಕ ಪ್ರಾದೇಶಿಕ ಕಛೇರಿ, ನಬಾರ್ಡ್ ಟವರ್, #46, ಕೆಂಪೇಗೌಡ ರಸ್ತೆ, ಬೆಂಗಳೂರು- 560 009.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ [ವೆಚ್ಚ-1], ವಿಧಾನಸೌಧ, ಬೆಂಗಳೂರು-1.
12. ಸರ್ಕಾರದ ಅಧೀನ ಕಾರ್ಯದರ್ಶಿ [ಸಮನ್ವಯ ಮತ್ತು ಸೇವೆಗಳು], ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
13. ಹೆಚ್ಚುವರಿ ಪ್ರತಿಗಳು ರಕ್ಷಾ ಕಡತಕ್ಕೆ.

8(ಅ೧)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ನಬಾರ್ಡ್ ಯೋಜನೆಯಡಿ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಅನುಮೋದಿಸುವ ಕುರಿತು.

**ಓದಲಾಗಿದೆ:** ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಪತ್ರ ಸಂ: ಕೈವಾಇ/ ಜಿಕೈಕೇ/ಸಿ2/01/ಮಾರ್ಗಸೂಚಿ/2016-17 ದಿ: 10.06.2016.

## ಪ್ರಸ್ತಾವನೆ

ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ನಬಾರ್ಡ್-ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ನೀಡುತ್ತಿರುವ ಅನುದಾನದಲ್ಲಿ ಸರ್ಕಾರದಿಂದ ಸ್ಥಾಪಿತಗೊಂಡ ಸಂಸ್ಥೆಗಳಲ್ಲಿ ತರಬೇತಿ ಕಟ್ಟಡ, ಕಾರ್ಯಾಗಾರ ಕಟ್ಟಡ, ವರ್ಕ್‌ಶಾಫ್, ಪ್ರಯೋಗಾಲಯ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಯನ್ನು ಅನುಷ್ಠಾನಗೊಳಿಸುವ ಮಾರ್ಗಸೂಚಿಗಳನ್ನು ಸಿದ್ಧಪಡಿಸಿ, ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಸಿಐ 47 ಸಪ್ರಕೈ 2016 ಬೆಂಗಳೂರು, ದಿನಾಂಕ: 30.08.2016

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ನಬಾರ್ಡ್-ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ಸರ್ಕಾರದಿಂದ ಸ್ಥಾಪಿತಗೊಂಡ ತರಬೇತಿ ಸಂಸ್ಥೆಗಳಿಗೆ ಅಗತ್ಯವಿರುವ ತರಬೇತಿ ಕಟ್ಟಡ, ಕಾರ್ಯಾಗಾರ ಕಟ್ಟಡ (ವರ್ಕ್‌ಶಾಫ್) ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ನಬಾರ್ಡ್ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯನ್ನು ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಅನುಮೋದನೆ ಪಡೆದು ನಂತರ ಈ ಯೋಜನೆಯ ಅನುಷ್ಠಾನವನ್ನು ಈ ಆದೇಶದಲ್ಲಿ ಅನುಮೋದಿಸಲಾಗಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

ನಬಾರ್ಡ್ ಸಂಸ್ಥೆಯು ಕಾಲಕಾಲಕ್ಕೆ ಮಾರ್ಗಸೂಚಿಯನ್ನು ಮಾರ್ಪಡಿಸಿದ್ದಲ್ಲಿ ಅದನ್ನು ಅಳವಡಿಸಿಕೊಳ್ಳತಕ್ಕದ್ದು.

ಈ ಯೋಜನೆಯ ಮಾರ್ಗಸೂಚಿ ಕುರಿತಂತೆ ರಾಜ್ಯ ಸರ್ಕಾರದಿಂದ ಹಿಂದೆ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಲಾಗಿದೆ.

## ನಬಾರ್ಡ್ ಎಸ್‌ಸಿಪಿ-ಟಿಎಸ್‌ಪಿ

### ಲೆಕ್ಕಶೀರ್ಷಿಕೆ 4851-00-102-0-09(SCP 437) (TSP-438)

ನಬಾರ್ಡ್-ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ನೀಡುತ್ತಿರುವ ಅನುದಾನದಲ್ಲಿ ಸರ್ಕಾರದಿಂದ ಸ್ಥಾಪಿತಗೊಂಡ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ಕಟ್ಟಡ, ಕಾರ್ಯಾಗಾರ ಕಟ್ಟಡ, ವರ್ಕ್‌ಶಾಪ್, ಪ್ರಯೋಗಾಲಯ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

**ಎ) ಅನುಷ್ಠಾನ ಸಂಸ್ಥೆಗಳು:**

ಜಿಟಿಟಿಸಿ ಮತ್ತು ಸರ್ಕಾರಿ ಸೌಮ್ಯದ ಸಂಸ್ಥೆಗಳು.

**ಬಿ) ಸಲ್ಲಿಸಬೇಕಾದ ದಾಖಲಾತಿಗಳು:**

**ಅ) ಕಟ್ಟಡ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ**

- ಹೊಸ ಸಂಸ್ಥೆ/ಕೇಂದ್ರವಾಗಿದ್ದಲ್ಲಿ ಸರ್ಕಾರದ ಅನುಮೋದಿತ ಆದೇಶ
- ಸಂಸ್ಥೆಯ ಹೆಸರಿನಲ್ಲಿ ಭೂಮಿ/ಕಟ್ಟಡ ಇರುವ ಬಗ್ಗೆ ದಾಖಲಾತಿಗಳು.
- ಕಟ್ಟಡದ ನೀಲಿ ನಕ್ಷೆ.
- ಪ್ರಸಕ್ತ ಸಾಲಿನ ಎಸ್.ಆರ್ ದರದಂತೆ ತಾಂತ್ರಿಕ ಅನುಮೋದನೆಯೊಂದಿಗೆ ಅಂದಾಜು ಪಟ್ಟಿ.
- ಉದ್ದೇಶಿತ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ತಯಾರಿಸಿದ ಪರ್ಟ ಚಾರ್ಟ.
- ಕಟ್ಟಡದ ಅವಶ್ಯಕತೆ ಬಗ್ಗೆ ನಿರ್ಮಾಣದ ಸಂಸ್ಥೆಯ ವಿವರಗಳ ಯೋಜನಾ ವರದಿ (ಡಿ.ಪಿ.ಆರ್)
- ಕಾಮಗಾರಿಯ ನಿರ್ಮಾಣಕ್ಕೆ ಸಂಬಂಧಪಟ್ಟ ಸಂಸ್ಥೆಯ ಆಡಳಿತ ಮಂಡಳಿ / ಸಮಿತಿ ಅನುಮೋದನೆ ಪಡೆದಿರುವ ಪ್ರತಿ.
- ಕೇಂದ್ರದಲ್ಲಿ ಈಗಾಗಲೇ ಇರುವ ಕಟ್ಟಡಗಳ ವಿವರ ಹಾಗೂ ಅವುಗಳ ಬಳಕೆ ಬಗ್ಗೆ ವಿವರಣೆ.
- ಸದರಿ ಪ್ರಸ್ತಾವನೆ ಕುರಿತು ಈಗಾಗಲೇ ಸರ್ಕಾರದಿಂದ ವಿವಿಧ ಯೋಜನೆಗಳಡಿ ಬಿಡುಗಡೆ ಮಾಡಿರುವ ಅನುದಾನ, ಬಳಕೆ ಹಾಗೂ ಬಳಕೆ ಪ್ರಮಾಣ ಪತ್ರ ಸಲ್ಲಿಸಿರುವ ಕುರಿತಂತೆ ವಿವರ ಹಾಗೂ ಸೃಜಿಸಿರುವ ಸ್ಥಿರಾಸ್ತಿ ವಿವರಗಳು.

**ಷರತ್ತು ಮತ್ತು ನಿಬಂಧನೆಗಳು:**

- ಬಿಡುಗಡೆಯಾದ ಅನುದಾನವನ್ನು ಅನುಮೋದಿತ ಕಾರ್ಯಕ್ರಮಗಳಿಗೆ ಮಾತ್ರ ಬಳಸತಕ್ಕದ್ದು.
- ಯೋಜನಾ ವೆಚ್ಚಕ್ಕಿಂತ ಹೆಚ್ಚುವರಿಯಾದಲ್ಲಿ ಅದನ್ನು ಸಂಸ್ಥೆಯೇ ಭರಿಸತಕ್ಕದ್ದು.
- ಯೋಜನೆ ಅನುಷ್ಠಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಅದರಡಿಯಲ್ಲಿ ರೂಪಿಸಿರುವ ನಿಯ್ಮಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
- ಯೋಜನೆ ಅನುಷ್ಠಾನವನ್ನ ಪಾರ್ಟ ಪರ್ಟ್ ಪ್ರಕಾರ ಪೂರ್ಣಗೊಳಿಸಿ ಉಪಯುಕ್ತ ಪ್ರಮಾಣ ಪತ್ರ ಮತ್ತು ಖರ್ಚಿನ ವಿವರ ಸಲ್ಲಿಸತಕ್ಕದ್ದು.
- ಕಟ್ಟಡದ ನಿರ್ಮಾಣಕ್ಕೆ ಸಂಬಂಧಿಸಿದಂತೆ ಗುಣಮಟ್ಟದ ತಪಾಸಣಾ ವರದಿಯನ್ನು ಮೂರನೇ ವ್ಯಕ್ತಿ/ ಸಂಸ್ಥೆಯಿಂದ ಖಾತರಿ ಪಡಿಸತಕ್ಕದ್ದು.
- ಸರ್ಕಾರವು ಆಗಿಂದಾಗ್ಗೆ ಸೂಚಿಸುವ ನಿಯಮ ಹಾಗೂ ನಿರ್ದೇಶನಗಳ ಪಾಲನೆ ಮಾಡತಕ್ಕದ್ದು

ಯೋಜನೆ ಅನುಷ್ಠಾನ:

- ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಅನುಷ್ಠಾನ ಸಂಸ್ಥೆಗಳಿಂದ ಪ್ರಸ್ತಾವನೆ ಪಡೆದು ಸರ್ಕಾರದ ಮುಖಾಂತರ ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸಿ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಅನುಮೋದನೆ ಪಡೆಯತಕ್ಕದ್ದು.
- ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳೊಂದಿಗೆ ಅನುಷ್ಠಾನ ಸಂಸ್ಥೆಗಳು ಪ್ರಸ್ತಾವನೆಯನ್ನು ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
- ನಿರ್ದೇಶನಾಲಯವು ಪ್ರಸ್ತಾವನೆಯನ್ನು ಮಾರ್ಗಸೂಚಿಯನ್ವಯ ಪರಿಶೀಲಿಸಿದ ನಂತರ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಸಲ್ಲಿಸುವುದು.
- ಅನುಷ್ಠಾನ ಸಂಸ್ಥೆಯು ಬಿಡುಗಡೆಯಾಗಿರುವ ಅನುದಾನವನ್ನು ಸದ್ಬಳಕೆ ಮಾಡಲು ಕೈಗೊಂಡಿರುವ ಕ್ರಮವನ್ನು ಪರಿಶೀಲಿಸಿ, ತದನಂತರ ನಿರ್ದೇಶನಾಲಯವು ಬಾಕಿ ಅನುದಾನ ಬಿಡುಗಡೆಗೆ ಕ್ರಮ ಜರುಗಿಸತಕ್ಕದ್ದು.

**ಈ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 312 ವೆಚ್ಚ-1/ 2016 ದಿ: 27.08.2016 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂ: ಪಿಡಿ 31 ಎಫ್‌ಆರ್‌ಓ 2016 ದಿ: 17.08.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Nagaraja
[ಎಸ್.ನಾಗರಾಜ್] 30/08/2016
ಪೀಠಾಧಿಕಾರಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

***ಸಂಕಲಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಶಾಖೆಗೆ ಒದಗಿಸಲು ಕೋರಲಾಗಿದೆ.***

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂ.5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ.5329, ಬೆಂಗಳೂರು-560001.
3. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.

9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಡೆಪ್ಯೂಟಿ ಜನರಲ್ ಮ್ಯಾನೇಜರ್, ನಬಾರ್ಡ್, ಕರ್ನಾಟಕ ಪ್ರಾದೇಶಿಕ ಕಛೇರಿ, ನಬಾರ್ಡ್ ಟವರ್, #46, ಕೆಂಪೇಗೌಡ ರಸ್ತೆ, ಬೆಂಗಳೂರು– 560 009.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ [ವೆಚ್ಚ–1], ವಿಧಾನಸೌಧ, ಬೆಂಗಳೂರು–1.
12. ಸರ್ಕಾರದ ಅಧೀನ ಕಾರ್ಯದರ್ಶಿ [ಸಮನ್ವಯ ಮತ್ತು ಸೇವೆಗಳು], ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು–1.
13. ಹೆಚ್ಚುವರಿ ಪ್ರತಿಗಳು ರಕ್ಷಾ ಕಡತಕ್ಕೆ.